ಮೆಟ್ರೋ ಫೀಡರ್ ಬಸ್ ಸೇವೆ ವಿಳಂಬ

120 ಬಸ್‌ಗಳ ಬಾಡಿಗೆಗೆ ಮೂರು ಬಾರಿ ಟೆಂಡರ್ ಆಹ್ವಾನಿಸಿದ ಬಿಎಂಟಿಸಿ

ಬೆಂಗಳೂರು: ಮೆಟ್ರೋ ಪ್ರಯಾಣಿಕರ ಅನುಕೂಲಕ್ಕಾಗಿ ಇನ್ನಷ್ಟು ಫಿಡರ್ ಬಸ್‌ಗಳ ಸಂಚಾರವನ್ನು ನಡೆಸುವ ಬಿಎಂಟಿಸಿಯ ಯೋಜನೆ ಇನ್ನಷ್ಟು ವಿಳಂಬವಾಗಲಿದೆ ಎಂದು ಸಂಸ್ಥೆಯ ಮೂಲಗಳು ತಿಳಿಸಿದೆ.

ಮೆಟ್ರೋ ಫೀಡರ್ ಮಾರ್ಗಗಳಿಗಾಗಿ 120 ಬಸ್‌ಗಳನ್ನು ಬಾಡಿಗೆಗೆ ಪಡೆಯಲು ಸಾರಿಗೆ ಅಧಿಕಾರಿಗಳು ಮೂರು ಬಾರಿ ಟೆಂಡರ್ ಕರೆದಿದ್ದರು. ಮೆಟ್ರೋ ಫೀಡರ್ ಬಸ್‌ಗಳ ಜತೆಗೆ 320 ಎಸಿ ಬಸ್‌ಗಳನ್ನು ಬಾಡಿಗೆಗೆ ಪಡೆಯಲು ಎರಡು ಟೆಂಡರ್‌ಗಳನ್ನು ಮತ್ತು 10 ಡಬಲ ಡೆಕ್ಕರ್ ಎಸಿ ಬಸ್‌ಗಳನ್ನು ಖರೀದಿಸಲು ಮೂರು ಟೆಂಡರ್‌ಗಳನ್ನು ಕರೆದಿದ್ದಾರೆ. ಅಲ್ಲದೆ, ಡಿಸೆಂಬರ್ 2023 ಮತ್ತು ಮಾರ್ಚ್ ಆರಂಭದಲ್ಲಿ 120 ನಾನ್ ಎಸಿ ಎಲೆಕ್ಟ್ರಿಕ್ ಬಸ್‌ಗಳನ್ನು ತನ್ನ ಮೆಟ್ರೋ ಫೀಡರ್ ನೆಟ್‌ವರ್ಕ್‌ನ್ನು ಹೆಚ್ಚಿಸಲು ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ. ಬಿಎಂಟಿಸಿಯು ಮೆಟ್ರೋ ಫೀಡರ್ ವ್ಯವಸ್ಥೆಗಾಗಿ 9 ಮೀಟರ್ ಉದ್ದದ , 900 ಎಂಎಂ ಎತ್ತರದ ಬಸ್‌ಗಳನ್ನು ಒಟ್ಟು ವೆಚ್ಚದ ಒಪ್ಪಂದದ ಆಧಾರದಲ್ಲಿ ಬಾಡಿಗೆ ಪಡೆಯಲು ಯೋಜನೆಯನ್ನು ರೂಪಿಸಿತ್ತು. ಬಿಎಂಟಿಸಿಯು ತಯಾರಕರಿಗೆ ಪ್ರತಿ ಕಿ.ಮೀ ಆಧಾರದ ಮೇಲೆ ಮಾತ್ರ ಪಾವತಿಸುತ್ತದೆ. ತಯಾರಕರು ಬಸ್ ನಿರ್ವಹಣೆ ನೋಡಿಕೊಳ್ಳಬೇಕಿದೆ. ಸಂಸ್ಥೆ ಚಾಲಕರನ್ನು ಒದಗಿಸುವ ಮತ್ತು ಚಾರ್ಜಿಂಗ್ ಮೂಲ ಸೌಕರ್ಯವನ್ನು ಹೊಂದಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ.

ಅರ್ಜಿ ಸಲ್ಲಿಸಲು ಏಪ್ರಿಲ್ 10 ಕೊನೆ ದಿನ

ಮೆಟ್ರೋ ಫಿಡರ್ ಬಸ್‌ಗಳನ್ನು ಖರೀದಿಸಲು ಬಿಎಂಟಿಸಿ ನ್ಯಾಷನಲ್ ಕ್ಲೀನ್ ಏರ್ ಪ್ರೋಗ್ರಾಂ ಮತ್ತು ರಾಜ್ಯ ನಗರ ಸಾರಿಗೆ ನಿಧಿಯಿಂದ ಹಣವನ್ನು ಬಳಸಿಕೊಳ್ಳುತ್ತಿದ್ದು, ಎರಡು ಬಾರಿ ಕರೆದ ಟೆಂಡರ್‌ಗಳಲ್ಲಿಯೂ ಉತ್ತಮವಾದ ಟೆಂಡರ್ ಆಗಮಿಸದ ಹಿನ್ನಲೆ ಮಾ. 15ರಂದು ಮೂರನೇ ಬಾರಿ ಕರೆದಿದೆ. ಈ ಟೆಂಡರ್‌ಗೆ ಬಿಡ್ ಸಲ್ಲಿಸಲು ಏ.10 ಕೊನೆಯ ದಿನಾಂಕವಾಗಿದೆ. ಆದರೆ ಯಾವುದೇ ಎಲೆಕ್ಟ್ರಿಕ್ ಬಸ್ ತಯಾರಕರು ಈ ಟೆಂಡರ್‌ನಲ್ಲಿ ಭಾಗವಹಿಸಲು ಮುಂದೆ ಬಂದಿಲ್ಲ. ಹೀಗಾಗಿ ಹೊಸದನ್ನು ಕರೆಯಬೇಕಾಗಿದೆ ಎಂದು ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕ ಆರ್.ರಾಮಚಂದ್ರನ್ ಹೇಳಿದ್ದಾರೆ.

ಸಚಿವ ರಾಮಲಿಂಗಾ ರೆಡ್ಡಿ ಅವರು ಪುತ್ರಿ, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯ ರೆಡ್ಡಿ ಜತೆಗೂಡಿ ತುಮಕೂರಿನ ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ ಸಿದ್ದಲಿಂಗ ಸ್ವಾಮೀಜಿ ಅವರ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಮಲ್ಲಿಕಾರ್ಜುನ್ ಮತ್ತು ಅವರ ಪತ್ನಿ ಮಾಜಿ ಮೇಯರ್ ಗಂಗಾಂಬಿಕ ಹಾಜರಿದ್ದರು.

ಸಮಾಚಾರ ಸಣ್ಣದಲ್ಲ

ರೈಲು ನಿಲುಗಡೆ ಜೂ.30ರವರೆಗೆ

ಬೆಂಗಳೂರು: ಬೀರೂರು ಮತ್ತು ರಾಮಗಿರಿ ನಿಲ್ದಾಣಗಳಲ್ಲಿ ಇರುವ ರೈಲುಗಳ ತಾತ್ಕಾಲಿಕ ನಿಲುಗಡೆಯನ್ನು ಮುಂದುವರಿಸಲು ನೈರುತ್ಯ ರೈಲ್ವೆ ನಿರ್ಧರಿಸಿದೆ. ಯಶವಂತಪುರ-ಬಿಕಾನೇರ್ ನಿಲ್ದಾಣಗಳ ನಡುವೆ ವಾರಕ್ಕೆರಡು ಸಲ ಸಂಚರಿಸುವ ಯಶವಂತಪುರ-ಬಿಕಾನೇರ್-ಯಶವಂತಪುರ ಎಕ್ಸ್‌ಪ್ರೆಸ್ ರೈಲು ಬೀರೂರು ನಿಲ್ದಾಣದಲ್ಲಿ ಒಂದು ನಿಮಿಷದ ತಾತ್ಕಾಲಿಕ ನಿಲುಗಡೆಯನ್ನು ಮಾ.31ರವರೆಗೆ ಹೊಂದಿತ್ತು. ಈಗ ಜೂ.30ರವರೆಗೆ ಮೂರು ತಿಂಗಳ ಕಾಲ ಮುಂದುವರಿಯಲಿದೆ. ಬೆಳಗಾವಿ-ಮೈಸೂರು ನಿಲ್ದಾಣಗಳ ನಡುವೆ ನಿತ್ಯ ಸಂಚರಿಸುವ ವಿಶ್ವಮಾನವ ಎಕ್ಸ್‌ಪ್ರೆಸ್ ಬೆಂಗಳೂರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣ-ಹುಬ್ಬಳ್ಳಿ ಸಿದ್ಧಾರೂಢ ಸ್ವಾಮೀಜಿ ನಿಲ್ದಾಣಗಳ ನಡುವೆ ಪ್ರತಿದಿನ ಸಂಚರಿಸುವ ಎಕ್ಸ್‌ಪ್ರೆಸ್ ರೈಲುಗಳನ್ನು ರಾಮಗಿರಿ ನಿಲ್ದಾಣದಲ್ಲಿ ಒಂದು ನಿಮಿಷ ತಾತ್ಕಾಲಿಕ ನಿಲುಗಡೆಗೊಳಿಸಲು ಮಾ.31ರ ವರೆಗೆ ಹಿಂದೆ ಅವಕಾಶ ನೀಡಲಾಗಿತ್ತು. ಈಗ ಸೆ.30ರವರೆಗೆ 6 ತಿಂಗಳ ಕಾಲ ನಿಲುಗಡೆಯನ್ನು ವಿಸ್ತರಣೆ ಮಾಡಲಾಗಿದೆ.

ವೃದ್ಧರ ಚಿನ್ನಾಭರಣ ಕಳವು: ಇಬ್ಬರ ಬಂಧನ

ಬೆಂಗಳೂರು: ಜಾತ್ರೆ, ದೇವರ ಉತ್ಸವ ಹಾಗೂ ಶುಭ ಸಮಾರಂಭಗಳಿಗೆ ಬರುವ ವೃದ್ಧರ ಚಿನ್ನಾಭರಣ ದೋಚುತ್ತಿದ್ದ ಇಬ್ಬರು ಮಹಿಳೆಯರನ್ನು ರಾಜಾಜಿ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ರಾಜಾಜಿ ನಗರ ನಿವಾಸಿಗಳಾದ ಆಶಾ ಮತ್ತು ಜ್ಯೋತಿ ಬಂಧಿತರು. ಆರೋಪಿಗಳಿಂದ 14.9 ಲಕ್ಷ ರು. ಮೌಲ್ಯದ 233 ಗ್ರಾಂ ಚಿನ್ನಾಭರಣ ವಶಕ್ಕೆ ಪಡೆ ಯಲಾಗಿದೆ. ಆರೋಪಿಗಳ ವಿರುದ್ಧ ಈ ಹಿಂದೆ ನಗರ ಮತ್ತು ಗ್ರಾಮಾಂತರ ಠಾಣೆಗಳಲ್ಲಿ ಕಳವು ಪ್ರಕರಣಗಳು ದಾಖಲಾಗಿದ್ದು, ಜೈಲಿಗೂ ಹೋಗಿದ್ದರು. ಆರೋಪಿಗಳು ಜಾತ್ರೆ, ದೇವರ ಉತ್ಸವ, ಶುಭ ಸಮಾರಂಭಗಳಿಗೆ ಹೋಗುತ್ತಿದ್ದ ಆರೋಪಿಗಳು ವಯಸ್ಸಾದ ಮಹಿಳೆಯ ರನ್ನು ಟಾರ್ಗೆಟ್ ಅವರನ್ನು ಮಾತನಾಡಿಸುತ್ತಾ, ಗಮನ ಬೇರೆಡೆ ಸೆಳೆದು ಚಿನ್ನಾಭರಣ ದೋಚಿ ಪರಾರಿ ಯಾಗುತ್ತಿದ್ದರು. ಇತ್ತೀಚೆಗೆ ಮಹಿಳೆಯೊಬ್ಬರು ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನಕ್ಕೆ ಹೋಗಿದ್ದ ಮಹಿಳೆಯೊಬ್ಬರ ಚಿನ್ನಾಭರಣ ದೋಚಿದ್ದರು. ಆರೋಪಿಗಳ ಬಂಧನದಿಂದ 7 ಕಳವು ಪ್ರಕರಣಗಳು ಪತ್ತೆಯಾಗಿವೆ ಎಂದು ಪೊಲೀಸರು ಹೇಳಿದರು.

ಅಗ್ನಿ ಶಾಮಕ ಉಪಕರಣ ಪರಿಶೀಲಿಸಿ

ಬೆಂಗಳೂರು: ಬೇಸಿಗೆಯಲ್ಲಿ ಅತಿಯಾದ ತಾಪಮಾನದಿಂದ ಆರೋಗ್ಯ ಸಂಸ್ಥೆಗಳಲ್ಲಿ ಅಗ್ನಿ ಅನಾಹುತಗಳು ಸಂಭವಿಸುವ ಸಾಧ್ಯತೆಗಳಿವೆ. ಆದ್ದರಿಂದ ಮುನ್ನೆಚ್ಚರಿಗೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆರೋಗ್ಯ ಇಲಾಖೆ ಆಯುಕ್ತ ಡಿ.ರಂದೀಪ್ ಸುತ್ತೋಲೆ ಹೊರಡಿಸಿದ್ದಾರೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸೇರಿ ಎಲ್ಲ ಹಂತದ ಸರಕಾರಿ ಆರೋಗ್ಯ ಸಂಸ್ಥೆಗಳಲ್ಲಿ, ವೈದ್ಯಕೀಯ ಕಾಲೇಜುಗಳಲ್ಲಿ ಹಾಗೂ ಮಾನ್ಯತೆ ಪಡೆದ ಎಲ್ಲ ಆಸ್ಪತ್ರೆಗಳಲ್ಲಿ ಬೆಂಕಿ ನಂದಿಸುವ ಉಪಕರಣಗಳ ಲಭ್ಯತೆ, ಕಾರ್ಯಶೀಲತೆಯನ್ನು ಪರಿಶೀಲಿಸಬೇಕು. ಮುಂಜಾಗ್ರತಾ ಕ್ರಮಗಳ ಪಾಲನೆಯನ್ನೂ ಖಚಿತಪಡಿಸಿಕೊಳ್ಳಬೇಕು. ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಅಗತ್ಯ ಕ್ರಮಗಳನ್ನು ಕೈಗೊಂಡು, ಅಗ್ನಿ ಅವಘಡಗಳನ್ನು ತಡೆಗಟ್ಟಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ತಿಳಿಸಲಾಗಿದೆ.

ಮರಣ ದಂಡನೆ ಶಿಕ್ಷೆ ಜೀವಾವಧಿಗೆ ಸೀಮಿತ

ತಾಯಿಯನ್ನು ಹತ್ಯೆಗೈದ ಪ್ರಕರಣದಲ್ಲಿ ವಿಧಿಸಿದ್ದ ಶಿಕ್ಷೆ ಕಡಿಮೆ ಮಾಡಿದ ಹೈಕೋರ್ಟ್

ಬೆಂಗಳೂರು: ಪ್ರಕರಣವೊಂದರಲ್ಲಿ ಮರಣ ದಂಡನೆ ಶಿಕ್ಷೆಯನ್ನು ಗಲ್ಲು ಶಿಕ್ಷೆಯಾಗಿ ಮಾರ್ಪಡಿಸಿ ಆದೇಶಿಸಿರುವ ಹೈಕೋರ್ಟ್, ಶಿಕ್ಷೆ ವಿಧಿಸುವಾಗ ವಿಚಾರಣಾಧೀನ ನ್ಯಾಯಾಲಯಗಳಿಗೆ ಭಾವನೆಗಳೇ ಪ್ರಧಾನವಾಗಬಾರದು ಎಂದು ಕಿವಿಮಾತು ಹೇಳಿದೆ.

ತಾಯಿಯನ್ನು ಕೊಲೆಗೈದಿದ್ದ ಪ್ರಕರಣವೊಂದರಲ್ಲಿ ಪುತ್ರನಿಗೆ ಗಲ್ಲು ಶಿಕ್ಷೆ ವಿಧಿಸಿದ್ದ ಸತ್ರ ನ್ಯಾಯಾಲಯದ ಆದೇಶವನ್ನು ರದ್ದುಗೊಳಿಸಿದ ನ್ಯಾಯಮೂರ್ತಿ ಶ್ರೀನಿವಾಸ ಹರೀಶ್ ಕುಮಾರ್ ಮತ್ತು ನ್ಯಾಯಮೂರ್ತಿ ಎಸ್.ರಾಚಯ್ಯ ಅವರ ನೇತೃತ್ವದ ವಿಭಾಗೀಯ ಪೀಠ ಈ ಕಿವಿಮಾತು ಹೇಳಿದೆ.

ಅಪರಾಧ ಸುದ್ದಿಗಳು

ಮರಣ ದಂಡನೆ ರದ್ದುಪಡಿಸಲು ಕೋರಿ ಅಪರಾಧಿ ತಿಮ್ಮಪ್ಪ ಸಲ್ಲಿಸಿದ್ದ ಕ್ರಿಮಿನಲ್ ಮೇಲ್ಮನವಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ, ಮರಣ ದಂಡನೆ ರದ್ದುಗೊಳಿಸಿತಾದರೂ ಅದರ ಬದಲು ಜೀವಾವಧಿ ಶಿಕ್ಷೆ ಮತ್ತು 25 ಸಾವಿರ ರು. ದಂಡ ವಿಧಿಸಿದೆ. ಒಂದು ವೇಳೆ ದಂಡ ಪಾವತಿಸದಿದ್ದರೆ ಮತ್ತೆ ಒಂದು ವರ್ಷ ಜೈಲು ಶಿಕ್ಷೆ ಅನುಭವಿಸಬೇಕಾಗುತ್ತದೆ ಎಂದು ಆದೇಶದಲ್ಲಿ ದಾಖಲಿಸಿದೆ. ಅಪರಾಧಿ ಎಸಗಿದ ಅಪರಾಧವು ಕ್ರೌರ್ಯ ಹಾಗೂ ಪಾಶವೀತನದಿಂದ ಕೂಡಿದೆ ಎನ್ನುವುದರಲ್ಲಿ ಅನುಮಾನವಿಲ್ಲ. ಆದರೆ, ಗಲ್ಲು ಶಿಕ್ಷೆ ವಿಧಿಸಲು ಭಾವನೆಗಳೇ ಪ್ರಭಾವಶಾಲಿ ಅಂಶಗಳಾಗಬಾರದು. ಆತನ ಅಪರಾಧಿಕ ಹಿನ್ನೆಲೆಯೂ ಕೂಡ ಮುಖ್ಯವಾಗುತ್ತದೆ. ಈ ಪ್ರಕರಣದಲ್ಲಿ ಅಪರಾಧಿಯು ಗಂಭೀರ ಕ್ರಿಮಿನಲ್ ಹಿನ್ನೆಲೆಯುಳ್ಳವನು ಎನ್ನುವುದನ್ನು ನಿರೂಪಿಸಲಾಗಿಲ್ಲ. ಅಂತೆಯೇ, ಇದು ಇದು ಅಪರೂಪದಲ್ಲೇ ಅಪರೂಪ ಎನ್ನುವಂತಹ ಪ್ರಕರಣವಲ್ಲ ಎಂದು ಪೀಠ ಹೇಳಿದೆ.

ಪ್ರಕರಣದ ಹಿನ್ನೆಲೆ

ಪತ್ನಿ ತನ್ನನ್ನು ತೊರೆದು ಹೋಗಲು ತಾಯಿಯೇ ಕಾರಣ ಎಂದು ಆರೋಪಿಸಿ ಹೊಳಲ್ಕೆರೆ ತಾಲೂಕಿನ ದುಮ್ಮಿ ಗೊಲ್ಲರಹಟ್ಟಿಯ ತಿಮ್ಮಪ್ಪ ಎಂಬಾತ ತಾಯಿಯ ಜತೆಗೆ ಜಗಳವಾಡಿದ್ದ. ಈ ವೇಳೆ ಉದ್ವೇಗಕ್ಕೆ ಒಳಗಾಗಿದ್ದ ಆತ ತನ್ನ ತಾಯಿಯ ಕುತ್ತಿಗೆಗೆ ಮಚ್ಚಿನಿಂದ ಹೊಡೆದಿದ್ದು, ಶಿರಚ್ಛೇದನಗೊಂಡು ಆಕೆ ಸ್ಥಳದಲ್ಲೇ ಸಾವನ್ನಪ್ಪಿದ್ದರು. ಪ್ರಕರಣದಲ್ಲಿ ತಿಮ್ಮಪ್ಪ ಅಪರಾಧಿ ಎಂದು ತೀರ್ಮಾನಿಸಿದ್ದ ಚಿತ್ರದುರ್ಗದ ಪ್ರಥಮ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 2018ರ ಜೂನ್ 2ರಂದು ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಿತ್ತು.

ಹಾಡಹಗಲೇ ರೌಡಿ ದಿನೇಶ್ ಬರ್ಬರ ಹತ್ಯೆ

ಪರಿಚಯಸ್ಥರಿಂದಲೇ ಕೊಲೆ ಮಾಡಿರುವ ಶಂಕೆ | ಬಾಣಸವಾಡಿ ಠಾಣೆಯಲ್ಲಿ ಪ್ರಕರಣ

ಬೆಂಗಳೂರು: ಹಾಡ ಹಗಲೇ ರೌಡಿ ಶೀಟರ್ ಒಬ್ಬನನ್ನು ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆ ಮಾಡಿದ ಪ್ರಕರಣ ಬಾಣಸವಾಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದೆ.

ರೌಡಿಶೀಟರ್ ದಿನೇಶ್ (36) ಹತ್ಯೆಯಾದವನು. ಸರ್ವೀಸ್ ಅಪಾರ್ಟ್‌ಮೆಂಟ್ ಒಂದರ ಸ್ವಾಗತ ಕೊಠಡಿಯಲ್ಲಿ ಕುಳಿತಿದ್ದ ವೇಳೆ ನುಗ್ಗಿದ ದುಷ್ಕರ್ಮಿಗಳು ಏಕಾಏಕಿ ಮಾರಕಾಸ್ತ್ರಗಳಿಂದ ದಾಳಿ ನಡೆಸಿ ಹತ್ಯೆ ಮಾಡಿದ್ದಾರೆ. ಪರಿಚಯಸ್ಥರೇ ಕೃತ್ಯ ಎಸಗಿರುವ ಶಂಕೆ ವ್ಯಕ್ತವಾಗಿದೆ.

ರೌಡಿ ದಿನೇಶ್, ಹಲವು ಪ್ರಕರಣಗಳಲ್ಲಿ ಭಾಗಿಯಾಗಿದ್ದ. ದುಷ್ಕರ್ಮಿಗಳ ದಾಳಿಗೆ ಸರ್ವೀಸ್ ಅಪಾರ್ಟ್‌ಮೆಂಟ್‌ನ ಸೋಫಾದಲ್ಲಿ ಕುಳಿತಿದ್ದ ದಿನೇಶ್ ಅಲ್ಲೇ ಶವವಾಗಿ ಬಿದ್ದಿದ್ದು, ಪೊಲೀಸರು ಸ್ಥಳಕ್ಕೆ ಆಗಮಿಸಿ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಸಾಗಿಸಿದ್ದರು.

ಘಟನಾ ಸ್ಥಳಕ್ಕೆ ಪೂರ್ವ ವಲಯದ ಹೆಚ್ಚುವರಿ ಪೊಲೀಸ್ ಆಯುಕ್ತ ರಮಣ್ ಗುಪ್ತ, ಪೂರ್ವ ವಿಭಾಗದ ಡಿಸಿಪಿ ಕುಲದೀಪ್ ಕುಮಾರ್ ಜೈನ್, ಬಾಣಸವಾಡಿ ಠಾಣಾ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಈ ಬಗ್ಗೆ ದೂರು ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ದಿನದ ಮಟ್ಟಿಗೆ ಕೊಠಡಿ ಕೇಳಲು ಬಂದಿದ್ದರು

ರೌಡಿ ಶೀಟರ್ ದಿನೇಶ್ ಹಾಗೂ ಸಹಚರರು, ಒಂದು ದಿನದ ಬಾಡಿಗೆಗೆಂದು ಕೊಠಡಿ ಕೇಳಿಕೊಂಡು ಸರ್ವೀಸ್ ಅಪಾರ್ಟ್‌ಮೆಂಟ್‌ಗೆ ಬಂದಿದ್ದರು. ದಿನೇಶ್ ಸೋಫಾ ಮೇಲೆ ಕುಳಿತಿದ್ದರೆ ಉಳಿದಿಬ್ಬರು ಹಣ ಪಾವತಿಸಲು ಕೌಂಟರ್ ಬಳಿ ಹೋಗಿದ್ದರು. ಮಾತುಕತೆ ಬಳಿಕ ಸಹಚರರು ಗೂಗಲ್ ಪೇ ಮೂಲಕ ಹಣ ಪಾವತಿಸಲು ಮುಂದಾದಾಗ ಅಲ್ಲಿನ ಸಿಬ್ಬಂದಿ, ನಗದು ಮಾತ್ರ ಸ್ವೀಕರಿಸುವುದಾಗಿ ಹೇಳಿದ್ದರು. ಹೀಗಾಗಿ ಅವರಿಬ್ಬರೂ ಹಣ ತರಲು ಸಮೀಪದ ಎಟಿಎಂಗೆ ಹೋಗಿದ್ದರು. ಈ ವೇಳೆ ಏಕಾಏಕಿ ದಾಳಿ ನಡೆಸಿದ ದುಷ್ಕರ್ಮಿಗಳು ದಿನೇಶ್‌ನನ್ನು ಹತ್ಯೆಗೈದು ಪರಾರಿಯಾಗಿದ್ದಾರೆ.

ಸಂಚು ರೂಪಿಸಿ ಹತ್ಯೆ

ದಿನೇಶ್‌ನ ಚಟುವಟಿಕೆಗಳ ಬಗ್ಗೆ ಕಣ್ಣಿಟ್ಟಿದ್ದ ಆತನ ಪರಿಚಿತರೇ ಹತ್ಯೆ ನಡೆಸಿರುವ ಶಂಕೆ ವ್ಯಕ್ತವಾಗಿದೆ. ಮೊದಲೇ ಸಂಚು ರೂಪಿಸಿ ಸರ್ವೀಸ್ ಅಪಾರ್ಟ್ ಮೆಂಟ್‌ವರೆಗೆ ಆತನನ್ನು ಹಿಂಬಾಲಿಸಿಕೊಂಡು ಬಂದು ಈ ಕೃತ್ಯ ಎಸಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದು, ಆರೋಪಿಗಳ ಬಗ್ಗೆ ಮಾಹಿತಿ ಕಲೆಹಾಕಲಾಗುತ್ತಿದೆ ಎಂದಿದ್ದಾರೆ.

ಮದ್ಯ ಸೇವಿಸುವಾಗ ಜಗಳ: ವ್ಯಕ್ತಿ ಹತ್ಯೆ

ಬೆಂಗಳೂರು: ಮದ್ಯ ಸೇವಿಸುವಾಗ ಉಂಟಾದ ಜಗಳದಲ್ಲಿ ವ್ಯಕ್ತಿಯೊಬ್ಬನನ್ನು ಹತ್ಯೆ ಮಾಡಿರುವ ಘಟನೆ ಗೋವಿಂದಪುರ ಪೊಲೀಸ್ ಠಾಣೆ ವ್ಯಾಪ್ತಿಯ ನಾಗವಾರದಲ್ಲಿ ನಡೆದಿದೆ.

ಉತ್ತರಪ್ರದೇಶದ ಗೋರಕ್‌ಪುರ ಮೂಲದ ರಾಜ್ ಕುಮಾರ್ (35) ಹತ್ಯೆಗೊಳಗಾದ ವ್ಯಕ್ತಿ. ಕುಡಿದ ಮತ್ತಿನಲ್ಲಿ ಸ್ನೇಹಿತನೇ ಕೊಲೆ ಮಾಡಿದ್ದು, ಪ್ರಕರಣ ಸಂಬಂಧ ಕಿಶನ್ ಕುಮಾರ್ ಹಾಗೂ ಇನ್ನೊಬ್ಬ ಆರೋಪಿಯನ್ನು ಬಂಧಿಸಲಾಗಿದ್ದು, ಹೆಚ್ಚಿನ ವಿಚಾರಣೆಗೆ ಒಳಪಡಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕೆಲ ವರ್ಷಗಳ ಹಿಂದೆ ಬೆಂಗಳೂರಿಗೆ ಬಂದು ನಾಗವಾರದಲ್ಲಿ ನೆಲೆಸಿದ್ದ ರಾಜ್ ಕುಮಾರ್, ಮಹದೇವ ಎಂಬುವರ ಬಳಿ ಪೇಂಟಿಂಗ್ ಮೇಸ್ತ್ರಿಯಾಗಿ ಕೆಲಸ ಮಾಡುತ್ತಿದ್ದ. ಮಂಗಳವಾರ ಹೋಳಿ ಹಬ್ಬ ಹಿನ್ನೆಲೆಯಲ್ಲಿ ಸ್ನೇಹಿತರೊಂದಿಗೆ ಸಂಭ್ರಮಾಚರಣೆಯಲ್ಲಿ ತೊಡಗಿಸಿಕೊಂಡು ಒಟ್ಟಿಗೆ ಮದ್ಯ ಸೇವನೆ ಮಾಡಿದ್ದರು. ಈ ವೇಳೆ ಕ್ಷುಲ್ಲಕ ಕಾರಣಕ್ಕೆ ಗಲಾಟೆಯಾಗಿದ್ದು, ಸಿಟ್ಟುಗೊಂಡ ಕಿಶನ್ ಕುಮಾರ್ ಲಾಂಗ್‌ನಿಂದ ರಾಜ್‌ಕುಮಾರ್ ಕತ್ತು ಸೀಳಿ ಕೊಲೆ ಮಾಡಿದ್ದಾನೆ ಎಂದು ತಿಳಿದುಬಂದಿದೆ. ಅದರಂತೆ ಕಿಶನ್ ಕುಮಾರ್‌ನನ್ನು ವಿಚಾರಣೆಗೊಳಪಡಿಸಿದಾಗ ಕೊಲೆ ಮಾಡಿರುವುದನ್ನು ಒಪ್ಪಿಕೊಂಡಿದ್ದಾನೆ. ಪೊಲೀಸರು ಇಬ್ಬರನ್ನೂ ಬಂಧಿಸಿದ್ದಾರೆ.

ಕುಡಿದ ಮತ್ತಿನಲ್ಲಿ ಆಟೋ ಚಾಲಕನ ಜತೆ ನಿಂದಿಸಿ ಯುವತಿ ಕಿರಿಕ್: ಪ್ರಕರಣ ದಾಖಲು

ಬೆಂಗಳೂರು: ಕುಡಿದ ಮತ್ತಿನಲ್ಲಿ ಯುವತಿಯೊಬ್ಬಳು ಅಡ್ಡಾದಿಡ್ಡಿ ಕಾರು ಚಲಾಯಿಸಿದ್ದಲ್ಲದೆ, ಪ್ರಶ್ನೆ ಮಾಡಿದ ಆಟೋ ಚಾಲಕನನ್ನು ನಿಂದಿಸಿ, ಹಲ್ಲೆ ಮಾಡಿರುವ ಘಟನೆ ಸಂಜಯನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಘಟನೆ ಸಂಬಂಧ ಆಟೋ ಚಾಲಕ ನಿಶಾಂತ್ ನೀಡಿದ ದೂರಿನ ಮೇರೆಗೆ ಸಂಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಏನಿದು ಘಟನೆ?

ಆಟೋ ಚಾಲಕ ನಿಶಾಂತ್ ಮಂಗಳವಾರ ರಾತ್ರಿ ಬಾಣಸವಾಡಿ ರೈಲ್ವೆ ನಿಲ್ದಾಣದಿಂದ ಪ್ರಯಾಣಿಕರನ್ನು ಹತ್ತಿಸಿಕೊಂಡು ಎಚ್ ಎಂಟಿ ಬಳಿ ಬರುವಾಗ, ಮುಂದೆ ಹೋಗುತ್ತಿದ್ದ ಕಾರು ವೇಗವಾಗಿ, ಅಡ್ಡಾದಿಡ್ಡಿ ಚಲಿಸುತ್ತಿತ್ತು. ಇದನ್ನು ಗಮನಿಸಿದ ನಿಶಾಂತ್, ಹಾರ್ನ್ ಮಾಡಿ ಜಾಗರೂಕತೆಯಿಂದ ವಾಹನ ಚಾಲನೆ ಮಾಡುವಂತೆ ಹೇಳಿದ್ದರು. ಈ ವೇಳೆ ಕಾರು ಚಾಲನೆ ಮಾಡುತ್ತಿದ್ದ ಯುವತಿ ಕೊಪಕೊಂಡು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಬಳಿಕ ಆಟೋ ಅಡ್ಡಗಟ್ಟಿ ನಡುರಸ್ತೆಯಲ್ಲಿಯೇ ಹಲ್ಲೆ ಮಾಡಿದ್ದಾಳೆ ಎಂದು ನಿಶಾಂತ್ ದೂರಿನಲ್ಲಿ ತಿಳಿಸಿದ್ದಾರೆ. ಯುವತಿ ಹಲ್ಲೆ ಮಾಡಿರುವ ದೃಶ್ಯ ಸ್ಥಳೀಯರೊಬ್ಬರ ಮೊಬೈಲ್ ನಲ್ಲಿ ಸೆರೆಯಾಗಿದ್ದು, ಸದ್ಯ ಈ ವಿಡಿಯೋ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದೆ.

ಕಾನೂನು ಬಾಹಿರವಾಗಿ ಆಟೋ ಜಪ್ತಿ